ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆಯೆಂದು ಭಾವಿಸುತ್ತೇನೆ.

ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆ

ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆ

ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

(ವಿಧೇಯಕವನ್ನು ಹಿಂದಕ್ಕೆ ಪಡೆಯಲಾಗಿದೆ)

ವಿತ್ತೀಯ ಕಾರ್ಯಕಲಾಪಗಳು

ಅಧ್ಯಕ್ಷರು: ಮಾನ್ಯ ಕಾನೂನು ಸಚಿವರೆ, ಈಗ ವಿತ್ತೀಯ ಕಾರ್ಯಕಲಾಪಗಳು,

ಶ್ರೀ ಜಗದೀಶ್ ಶೆಟ್ಟರ್ (ವಿರೋಧ ಪಕ್ಷದ ನಾಯಕರು): ಮಾನ್ಯ ಸಪ್ಲಿಮೆಂಟರಿ ಬಜೆಟ್‌ನ್ನು ಮಾನ್ಯ ಮುಖ್ಯಮಂತ್ರಿಗಳು ಮಂಡನೆ ಮಾಡಬೇಕು. ಈಗ ಹೌಸ್ ಆರ್ಡರ್‌ನಲ್ಲಿ ಇಲ್ಲ. ಈ ಒಂದು ಆರ್ಥಿಕ ಬಿಲ್‌ನ್ನು ಮಂಡಿಸಲು ಈಗ ಹೌಸ್ ಆರ್ಡರನಲ್ಲಿ ಇಲ್ಲ, ಸರ್ಕಾರವು ಆರ್ಡರ್‌ನಲ್ಲಿ ಇಲ್ಲ.

ಶ್ರೀ ಟಿ. ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ನೀವು ಹೊರಗಡೆ ಬಂದರೆ ಎಲ್ಲವೂ ಸರಿ ಆಗುತ್ತದೆ. ಆದರೆ ನೀವು ಹೊರಗಡೆ ಬರುವುದಕ್ಕೆ ತಯಾರಿಲ್ಲವಲ್ಲ.

3. ವರದಿಯ ಮಂಡನೆ ವರದಿ.

ಶ್ರೀ ಟಿ. ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ): ಮಾನ್ಯ ಅಧ್ಯಕ್ಷರೆ, 2015–16ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯವಾರ್ಷಿಕ ಪರಿಶೀಲನಾ ವರದಿಯನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಯಿತು. ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವನೆ ಹೀಗಿದೆ, 2015–16ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯವಾರ್ಷಿಕ ಪರಿಶೀಲನಾ ವರದಿಯನ್ನು ಮಂಡಿಸಲು ಅನುಮತಿಯನ್ನು ನೀಡುವುದು.

ಪ್ರಸ್ತಾವದ ಪರವಾಗಿರುವವರು ಹೌದು ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು ಇಲ್ಲ ಎಂದು ಸೂಚಿಸಬೇಕು

ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆಯೆಂದು ಭಾವಿಸುತ್ತೇನೆ.

ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆ

ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆ

ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆ

ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ

(ವರದಿಯನ್ನು ಮಂಡಿಸಲಾಯಿತು)

4. ವಿತ್ತೀಯ ಕಾರ್ಯಕಲಾಪಗಳು

2015–16ನೇ ಸಾಲಿನ ಪೂರಕ ಅಂದಾಜುಗಳು (ಎರಡನೇ ಕಂತು) ಮೇಲೆ ಚರ್ಚೆ, ಉತ್ತರ ಹಾಗೂ ಮತಕ್ಕೆ ಹಾಕುವುದು

(ಗೊಂದಲ)

ಅಧ್ಯಕ್ಷರು: ಈಗ 2015–16ನೇ ಸಾಲಿನ ಪೂರಕ ಅಂದಾಜುಗಳ (ಎರಡನೇ ಕಂತು) ಮೇಲೆ ಚರ್ಚೆ ಉತ್ತರ ಹಾಗೂ ಮತಕ್ಕೆ ಹಾಕುವುದು. ಮಾನ್ಯ ಸಚಿವರೆ ಹೇಳಿ.

ಶ್ರೀ ಟಿ. ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ): ಮಾನ್ಯ ಅಧ್ಯಕ್ಷರೆ, "2016 ನೇ ಮಾರ್ಚ 31 ರಂದು ಕೊನೆಗೊಳ್ಳುವ ಆರ್ಥಿಕ